# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶುಕ್ರವಾರ, ದಿನಾಂಕ:17ನೇ ಸೆಪ್ಟೆಂಬರ್, 2021**

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

## 02. ವರದಿಯನ್ನೊಪ್ಪಿಸುವುದು

**ಶ್ರೀ ಎಂ.ಕೆ. ಪ್ರಾಣೇಶ್,** (ಮಾನ್ಯ ಉಪ ಸಭಾಪತಿಯವರು ಹಾಗೂ ಅಧ್ಯಕ್ಷರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ) ಅವರು ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಮೊದಲನೆಯ ವರದಿಯನ್ನೊಪ್ಪಿಸುವುದು.

## 03. ಗಮನ ಸೆಳೆಯುವ ಸೂಚನೆ

**ಶ್ರೀ ಎಸ್.ವ್ಹಿ. ಸಂಕನೂರ** ಅವರು ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರ ಕಾರ್ಯಭಾರವನ್ನು ದಿನಾಂಕ:20.02.2017ರ ಸುತ್ತೋಲೆಯಲ್ಲಿ ನಿಗದಿಪಡಿಸಿರುವುದರಿಂದ ತೆರವಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಉಂಟಾಗಿರುವ ತೊಂದರೆ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

01. **ಶ್ರೀ ಎಸ್.ಆರ್.ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು,** ಅವರು ಉತ್ತರ ಕರ್ನಾಟಕ ಭಾಗದ ಅನೇಕ ಖಾಸಗಿ ಸಕ್ಕರೆ ಕಾರ್ಖಾನೆಗಳು ನಷ್ಟ ಅನುಭವಿಸುತ್ತಿದ್ದು, ಸದರಿ ಸಕ್ಕರೆ ಕಾರ್ಖಾನೆಗಳಿಗೆ ಆರ್ಥಿಕ ನೆರವು ನೀಡಿದಂತಹ ಸಹಕಾರಿ ಬ್ಯಾಂಕ್‌ಗಳು ಸಹ ದುಸ್ಥಿತಿಗೆ ಬಂದಿರುವುದರಿಂದ ಕಬ್ಬು ಬೆಳೆಗಾರರ ಪರಿಸ್ಥಿತಿ ದುಸ್ತರವಾಗಿದ್ದು, ಕಬ್ಬು ಬೆಳೆಗಾರರ ಹಾಗೂ ಸಹಕಾರಿ ಬ್ಯಾಂಕ್‌ಗಳನ್ನು ಸುಸ್ಥಿತಿಗೆ ತರುವ ಸಂಬಂಧವಾಗಿ ಸೂಕ್ತ ಮಾರ್ಗೋಪಾಯಗಳನ್ನು ಕಂಡುಕೊಳ್ಳುವ ಕುರಿತು ಪ್ರಸ್ತಾಪಿಸುವುದು.

..2..

೦2. **ಶ್ರೀಯುತರುಗಳಾದ ಕೆ.ಟಿ.ಶ್ರೀಕಂಠೇಗೌಡ, ಮರಿತಿಬ್ಬೇಗೌಡ, ಎಸ್.ವ್ಹಿ. ಸಂಕನೂರ ಹಾಗೂ ಅರುಣ ಶಹಾಪೂರ** ಅವರುಗಳು ದಿನಾಂಕ:02.02.2000ರ ಪೂರ್ವದಲ್ಲಿ ಖಾಸಗಿ ಅನುದಾನಿತ ಪ್ರೌಢ ಶಾಲೆಯಲ್ಲಿ 15-20 ವರ್ಷಗಳಿಂದ ಸೇವೆ ಸಲ್ಲಿಸಿರುವ "ಡಿ" ಗುಂಪು ನೌಕರರನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಪ್ರಸ್ತಾಪಿಸುವುದು.

## ೦5. ಖಾಸಗಿ ಸದಸ್ಯರ ಕಾರ್ಯಕಲಾಪಗಳು

### ಅ) ಖಾಸಗಿ ವಿಧೇಯಕ

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ (ಮೊದಲನೇ ತಿದ್ದುಪಡಿ) ವಿಧೇಯಕ, 2020**

ಅ) ಶ್ರೀ ಪಿ.ಆರ್. ರಮೇಶ್ ಅವರು "ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ (ಮೊದಲನೇ ತಿದ್ದುಪಡಿ) ವಿಧೇಯಕ"ವನ್ನು ಮಂಡಿಸಲು ಅನುಮತಿಯನ್ನು ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

### ಆ) ಖಾಸಗಿ ನಿರ್ಣಯ

ದೇಸೀಯಾ ಪರಂಪರೆಯ ಆಯುರ್ವೇದ ವೈದ್ಯ ಪದ್ಧತಿಗೆ ಮನ್ನಣೆ ದೊರಕಿಸಿ ಕೊಡುವ ಸಲುವಾಗಿ ನೀತಿಯೊಂದನ್ನು ರೂಪಿಸುವ ಕುರಿತು **ಶ್ರೀ ಯು.ಬಿ. ವೆಂಕಟೇಶ್** ಅವರು ಮಂಡಿಸಿರುವ ನಿರ್ಣಯದ ಮೇಲೆ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**